# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 890 (93)
2. ಸದಸ್ಯರ ಹೆಸರು : ಶ್ರೀ ಯು.ಬಿ.ವೆಂಕಟೇಶ್ (ನಾಮ ನಿರ್ದೇಶನ ಹೊಂದಿದವರು)
3. ಉತ್ತರಿಸಬೇಕಾದ ದಿನಾಂಕ : 21/12/2021
4. ಉತ್ತರಿಸುವವರು : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು

| ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| (ಅ) | ಕೇಂದ್ರ ಸರ್ಕಾರದ ಮೇಕ್ ಇನ್ ಇಂಡಿಯಾ ಕಾರ್ಯಕ್ರಮದ ಅಡಿಯಲ್ಲಿ ಪ್ರಾರಂಭಿಸಲಾದ ಕಾರ್ಯಕ್ರಮಗಳು/ಯೋಜನೆಗಳ ಸಂಖ್ಯೆ ಎಷ್ಟು; ಕಳೆದ ಮೂರು ವರ್ಷಗಳಲ್ಲಿ ಈ ಕಾರ್ಯಕ್ರಮಗಳು/ ಯೋಜನೆಗಳಿಗೆ ನಿಗಧಿಪಡಿಸಿದ/ ಬಳಸಲಾದ ಮೊತ್ತವೆಷ್ಟು; | "ಮೇಕ್ ಇನ್ ಇಂಡಿಯಾ" ಕಾರ್ಯಕ್ರಮವು ಕೇಂದ್ರ ಸರ್ಕಾರದ ಯೋಜನೆಯಾಗಿದ್ದು, ಹೂಡಿಕೆಯನ್ನು ಸುಗಮಗೊಳಿಸಲು, ನಾವೀನ್ಯತೆಯನ್ನು ಪೋಷಿಸಲು, ಕೌಶಲ್ಯ ಅಭಿವೃದ್ಧಿಯನ್ನು ಹೆಚ್ಚಿಸಲು ಮತ್ತು ಅತ್ಯುತ್ತಮ ದರ್ಜೆಯ ಉತ್ಪಾದನಾ ಮೂಲಸೌಕರ್ಯವನ್ನು ನಿರ್ಮಿಸುವ ಯೋಜನೆಯಾಗಿರುತ್ತದೆ.<br><br>ಈ ಯೋಜನೆಗೆ ಪೂರಕವಾಗಿ ಕರ್ನಾಟಕದಲ್ಲಿ ಬಂಡವಾಳ ಹೂಡಿಕೆಯನ್ನು ಆಕರ್ಷಿಸಿ, ಸುಗಮಗೊಳಿಸಲು ಕೆಳಕಂಡ ಕಾರ್ಯಕ್ರಮಗಳನ್ನು ಪ್ರಾರಂಭಿಸಲಾಗಿದೆ:<br>❖ ಜಮೀನು ಪಡೆಯುವುದನ್ನು ಅನುಕೂಲಗೊಳಿಸಲು ಕರ್ನಾಟಕ ಭೂ ಸುಧಾರಣಾ ಕಾಯ್ದೆ 1961ರ ಸೆಕ್ಷನ್ 109ಕ್ಕೆ ತಿದ್ದುಪಡಿ ತರಲಾಗಿದೆ;<br>❖ ರಾತ್ರಿ ಪಾಳಿಯಲ್ಲಿ ಅಂದರೆ ರಾತ್ರಿ 7 ರಿಂದ ಬೆಳಿಗ್ಗೆ 6 ಗಂಟೆಯವರೆಗೆ ಕಾರ್ಯನಿರ್ವಹಿಸಲು ಮುಂದೆ ಬರುವ ಮಹಿಳಾ ಕಾರ್ಮಿಕರಿಗೆ ಅನುಕೂಲ ಮಾಡಲು ಫ್ಯಾಕ್ಟರೀಸ್ ಕಾಯ್ದೆ 1948ರಡಿ ತಿದ್ದುಪಡಿ ತರಲಾಗಿದೆ.<br>❖ ಒಂದು ತ್ರೈಮಾಸಿಕದಲ್ಲಿ ಒಟ್ಟು 125 ಗಂಟೆಗಳವರೆಗೆ ಹೆಚ್ಚುವರಿಯಾಗಿ ಕಾರ್ಯನಿರ್ವಹಿಸಲು ಫ್ಯಾಕ್ಟರೀಸ್ ಕಾಯ್ದೆ, 1948ರಡಿ ತಿದ್ದುಪಡಿ ತರಲಾಗಿದೆ;<br>❖ ಫಿಕ್ಸ್‌ಡ್ ಟರ್ಮ್ ಎಂಪ್ಲಾಯ್‌ಮೆಂಟ್ (ಎಫ್.ಟಿ.ಇ.) / ಕಾಂಟ್ರ್ಯಾಕ್ಟ್ ಎಂಪ್ಲಾಯ್‌ಮೆಂಟ್‌ಗಳ ಬಗ್ಗೆ ಅವಶ್ಯ ತಿದ್ದುಪಡಿಗಳನ್ನು ಕರ್ನಾಟಕ ಇಂಡಸ್ಟ್ರೀಯಲ್ ಎಂಪ್ಲಾಯ್‌ಮೆಂಟ್ (ಸ್ಟ್ಯಾಂಡಿಂಗ್ ಆರ್ಡರ್) ಆಕ್ಟ್, 1946 ರಡಿ ತರಲಾಗಿದೆ.<br>❖ ಕಾಲಕ್ಕನುಗುಣವಾಗಿ ಕನಿಷ್ಠ ವೇತನ ಪರಿಷ್ಕರಣೆಯನ್ನು ಕನಿಷ್ಟ ವೇತನ ಕಾಯ್ದೆಯಡಿ ನಿಗಧಿಪಡಿಸಲಾಗುವುದು ಮತ್ತು ಹಣದುಬ್ಬರ & ಗ್ರಾಹಕ ಬೆಲೆ ಸೂಚ್ಯಂಕ (ಸಿಪಿಐ)ರ ಅಂಶಗಳಿಗೂ ಸಹ ಲಿಂಕ್ ಆಗಿರುತ್ತದೆ. |

- ಸರಕು ರಫ್ತು ಉತ್ತೇಜಿಸಲು, ಕರ್ನಾಟಕ ಇಂಡಸ್ಟ್ರೀಯಲ್ ಎಂಪ್ಲಾಯ್‌ಮೆಂಟ್ (ಸ್ಟ್ಯಾಂಡಿಂಗ್ ಆರ್ಡರ್) ಆಕ್ಟ್, 1946 ರಡಿ ಐಟಿ ಮತ್ತು ಐಟಿಇಎಸ್ ಎಸ್ಟ್ಯಾಬ್ಲಿಷ್‌ಮೆಂಟ್‌ಗಳಿಗೆ ಅವಕಾಶವಿರುವಂತೆ ಇದೇ ವಿನಾಯಿತಿಯನ್ನು ಮ್ಯಾನುಫ್ಯಾಕ್ಚರಿಂಗ್ ಎಸ್.ಇ.ಜೆಡ್.ಗಳಿಗೂ ವಿಸ್ತರಿಸಲಾಗಿದೆ.
- ಎಸ್.ಹೆಚ್.ಎಲ್.ಸಿ.ಸಿ. / ಎಸ್.ಎಲ್.ಎಸ್.ಡಬ್ಲ್ಯೂ.ಸಿ.ಸಿ./ ಡಿ.ಎಲ್.ಎಸ್.ಡಬ್ಲ್ಯೂ.ಸಿ.ಸಿ.ಯಿಂದ ಅನುಮೋದನೆ ಪಡೆದ ನಂತರ ಉತ್ಪಾದನಾ ಕೈಗಾರಿಕೆಗಳು / ಉದ್ಯಮಗಳ ಸ್ಥಾಪನೆಗೆ ಅನುಕೂಲವಾಗುವಂತೆ, ಉದ್ಯಮಗಳಿಗೆ ಸ್ವೀಕೃತಿ ಪ್ರಮಾಣಪತ್ರಗಳನ್ನು ನೀಡಲಾಗುವುದು. ಈ ಪ್ರಮಾಣಪತ್ರವು ವಿವಿಧ ಕೆಳಹಂತದ ಇಲಾಖೆಗಳಿಂದ ಪಡೆಯುವ ಪರವಾನಗಿ / ಅನುಮೋದನೆಗಳಿಗೆ ಮೂರು ವರ್ಷಗಳ ಆರಂಭಿಕ ಅವಧಿಗೆ ಅಥವಾ ವಾಣಿಜ್ಯ ಕಾರ್ಯಾಚರಣೆಗಳು ಪ್ರಾರಂಭವಾದ ದಿನಾಂಕದಿಂದ ಯಾವುದು ಮೊದಲೋ ಅಲ್ಲಿಯವರೆಗೆ ವಿನಾಯಿತಿಯನ್ನು ನೀಡಿದೆ.
- ಅತ್ಯುತ್ತಮ ದರ್ಜೆಯ ಉತ್ಪಾದನಾ ಮೂಲಸೌಕರ್ಯವನ್ನು ನಿರ್ಮಿಸುವ ಸಲುವಾಗಿ ಚೆನ್ನೈ-ಬೆಂಗಳೂರು ಕೈಗಾರಿಕಾ ಕಾರಿಡಾರ್, ಬೆಂಗಳೂರು-ಮುಂಬೈ ಆರ್ಥಿಕ ಕಾರಿಡಾರ್ ಹಾಗೂ ಬೆಂಗಳೂರು-ಹೈದರಾಬಾದ್ ಕಾರಿಡಾರ್‌ಗಳಡಿ ಭಾರತ ಸರ್ಕಾರದ ಸಹಯೋಗದೊಂದಿಗೆ ಕೈಗಾರಿಕಾ ನೋಡ್‌ಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ. ಕ್ರಮವಾಗಿ ತುಮಕೂರಿನ ವಸಂತನರಸಾಪುರದ ಸುಮಾರು 9,600 ಎಕರೆ ಜಮೀನಿನಲ್ಲಿ, ಧಾರವಾಡದ ಸುಮಾರು 6,000 ಎಕರೆ ಜಮೀನಿನಲ್ಲಿ ಹಾಗೂ ಕಡೆಚೂರು ಯಾದಗಿರಿಯ ಸುಮಾರು 3,000 ಎಕರೆ ಜಮೀನಿನಲ್ಲಿ ಕೈಗಾರಿಕಾ ನೋಡ್‌ಗಳನ್ನು ಸ್ಥಾಪಿಸಲು ಕ್ರಮ ಕೈಗೊಳ್ಳಲಾಗಿದೆ;
- ಅಲ್ಲದೇ, ಉತ್ತಮ ಉತ್ಪಾದನಾ ಮೂಲಸೌಕರ್ಯವನ್ನು ನಿರ್ಮಿಸುವ ಸಲುವಾಗಿ ಕೆಐಎಡಿಬಿಯು ಪ್ರತಿ ಜಿಲ್ಲೆಯಲ್ಲೂ ಕೈಗಾರಿಕಾ ಪ್ರದೇಶಗಳನ್ನು ಅಭಿವೃದ್ಧಿಪಡಿಸಲು ಕ್ರಮ ಕೈಗೊಳ್ಳುತ್ತಿದೆ.
- ರಾಜ್ಯದಲ್ಲಿ ಕೈಗಾರಿಕಾ ಬಂಡವಾಳ ಹೂಡಿಕೆಯನ್ನು ಆಕರ್ಷಿಸಲು, ಹೊಸ ಕೈಗಾರಿಕಾ ನೀತಿ 2020-25ನ್ನು ಹೊರತಂದಿದ್ದು, ಭಾರತ ಸರ್ಕಾರದಂತೆ ತೆರಿಗೆ ಆಧಾರಿತ ಪ್ರೋತ್ಸಾಹಗಳ ಬದಲಾಗಿ ಉತ್ಪಾದನಾ ಆಧಾರಿತ ಕಾರ್ಯಕ್ಷಮತೆಯನ್ನು ಉತ್ತೇಜಿಸಲು ವಾರ್ಷಿಕ ವಹಿವಾಟಿನ ಮೇಲೆ ಪ್ರೋತ್ಸಾಹಗಳನ್ನು ನೀಡಲಾಗುತ್ತಿದೆ.